# ವಲಸೆ (ವಾಹಕರ ಹೊಣೆಗಾರಿಕೆ) ಅಧಿನಿಯಮ, 2000

(13.02.09ರ ಭಾರತ ವಿಶೇಷ ರಾಜಪತ್ರದ IXನೇ ಭಾಗದ 1ನೇ ವಿಭಾಗದ 39ನೇ ಸಂಪುಟದ 1ನೇ ಸಂಚಿಕೆಯಲ್ಲಿ 84 ರಿಂದ 86ರ ವರೆಗಿನ ಪುಟಗಳಲ್ಲಿ ಪ್ರಕಟವಾಗಿದೆ)

## ಪ್ರಕರಣಗಳ ಅನುಕ್ರಮಣಿಕೆ

**ಪ್ರಕರಣಗಳು:**

1. ಚಿಕ್ಕ ಹೆಸರು ಮತ್ತು ವ್ಯಾಪ್ತಿ

2. ಪರಿಭಾಷೆಗಳು

3. ಭಾರತದೊಳಕ್ಕೆ ಕರೆತಂದ ಪ್ರಯಾಣಿಕರ ಬಗ್ಗೆ ವಾಹಕರ ಹೊಣೆಗಾರಿಕೆ

3ಎ. ವಿನಾಯಿತಿ ನೀಡಲು ಅಧಿಕಾರ

4. ಅಪೀಲುಗಳು

5. ಸರ್ಕಾರಕ್ಕೆ ಬರಬೇಕಾದ ದಂಡದ ವಸೂಲಾತಿ

6. ಕಾನೂನು ವ್ಯವಹರಣೆಗಳ ಪ್ರತಿಷೇಧ

7. 1939ರ 16, 1920ರ 34 ಮತ್ತು 1946ರ 31 ಅಧಿನಿಯಮಗಳ ಅನ್ವಯವನ್ನು ಪ್ರತಿಷೇಧಿಸತಕ್ಕದ್ದಲ್ಲ

8. ನಿಯಮ ರಚನಾಧಿಕಾರ

9. ನಿಯಮಗಳನ್ನು ಸಂಸತ್ತಿನ ಮುಂದೆ ಮಂಡಿಸತಕ್ಕದ್ದು

10. ತೊಂದರೆಗಳನ್ನು ನಿವಾರಿಸುವ ಅಧಿಕಾರ

# ವಲಸೆ (ವಾಹಕರ ಹೊಣೆಗಾರಿಕೆ) ಅಧಿನಿಯಮ, 2000

(2000ದ ಅಧಿನಿಯಮ ಸಂಖ್ಯೆ 52)

[11ನೇ ಡಿಸೆಂಬರ್, 2000]

ಪಾಸ್‌ಪೋರ್ಟ್ (ಭಾರತದೊಳಕ್ಕೆ ಪ್ರವೇಶ) ಅಧಿನಿಯಮ, 1920ರ ಉಪಬಂಧಗಳನ್ನು ಹಾಗೂ ಅದರ ಮೇರೆಗೆ ರಚಿಸಿದ ನಿಯಮಗಳನ್ನು ಉಲ್ಲಂಘಿಸಿ ಭಾರತದೊಳಗೆ ಪ್ರಯಾಣಿಕರನ್ನು ಕರೆತರುವುದಕ್ಕೆ ಸಂಬಂಧಿಸಿದ ಮತ್ತು ಅದಕ್ಕೆ ಸಂಬಂಧಿಸಿದ ವಿಷಯಗಳಿಗೆ ವಾಹಕರನ್ನು ಹೊಣೆಗಾರರನ್ನಾಗಿ ಮಾಡುವ ಅಧಿನಿಯಮ.

ಭಾರತ ಗಣರಾಜ್ಯದ ಐವತ್ತೊಂದನೇ ವರ್ಷದಲ್ಲಿ ಸಂಸತ್ತಿನಿಂದ ಈ ಮುಂದಿನಂತೆ ಅಧಿನಿಯಮಿತವಾಗತಕ್ಕದ್ದು:-

**1. ಚಿಕ್ಕ ಹೆಸರು ಮತ್ತು ವ್ಯಾಪ್ತಿ.-** (1) ಈ ಅಧಿನಿಯಮವನ್ನು ವಲಸೆ (ವಾಹಕರ ಹೊಣೆಗಾರಿಕೆ) ಅಧಿನಿಯಮ, 2000 ಎಂದು ಕರೆಯತಕ್ಕದ್ದು.

(2) ಇದು, ಇಡೀ ಭಾರತಕ್ಕೆ ವ್ಯಾಪ್ತವಾಗುತ್ತದೆ.

**2. ಪರಿಭಾಷೆಗಳು.-** (1) ಈ ಅಧಿನಿಯಮದಲ್ಲಿ, ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,-

(ಎ) "ವಾಹಕ" ಎಂದರೆ ಜಲ ಅಥವಾ ವಾಯುಮಾರ್ಗದ ಮೂಲಕ ಪ್ರಯಾಣಿಕರನ್ನು ಸಾಗಿಸುವ ವ್ಯವಹಾರದಲ್ಲಿ ತೊಡಗಿರುವ ವ್ಯಕ್ತಿ ಎಂದು ಅರ್ಥ ಮತ್ತು ನಿಗಮಿತವಾಗಿರಲಿ ಅಥವಾ ಇಲ್ಲದಿರಲಿ, ವಿಮಾನವನ್ನು ಅಥವಾ ಹಡಗನ್ನು ಸ್ವತಃ ಹೊಂದಿರುವ ಅಥವಾ ಬಾಡಿಗೆಗೆ ಪಡೆದುಕೊಂಡಿರುವ ವ್ಯಕ್ತಿಗಳ ಯಾವುದೇ ಸಂಘವನ್ನು ಒಳಗೊಳ್ಳುತ್ತದೆ;

(ಬಿ) "ಸಕ್ಷಮ ಪ್ರಾಧಿಕಾರ" ಎಂದರೆ ವಿದೇಶಿಯರ ಅಧಿನಿಯಮ, 1946 (1946ರ 31)ರ ಮೇರೆಗೆ ರಚಿತವಾದ ವಿದೇಶಿಯರ ಆದೇಶ, 1948ರ 2ನೇ ಪ್ಯಾರಾದ (2)ನೇ ಉಪಪ್ಯಾರಾದ ಮೇರೆಗೆ ನೇಮಕವಾದ ಸಿವಿಲ್ ಪ್ರಾಧಿಕಾರಿ ಅಥವಾ ಇದಕ್ಕಾಗಿ ಕೇಂದ್ರ ಸರ್ಕಾರದಿಂದ ಅಧಿಸೂಚಿತನಾದ ಯಾರೇ ಇತರ ಅಧಿಕಾರಿ ಎಂದು ಅರ್ಥ;

(ಸಿ) "ಗೊತ್ತುಪಡಿಸಲಾದುದು" ಎಂದರೆ ಈ ಅಧಿನಿಯಮದ ಮೇರೆಗೆ ರಚಿಸಲಾದ ನಿಯಮಗಳ ಮೂಲಕ ಗೊತ್ತುಪಡಿಸಲಾದುದು.

(2) ಈ ಅಧಿನಿಯಮದಲ್ಲಿ ಪರಿಭಾಷಿಸಿಲ್ಲದ, ಆದರೆ ವಿದೇಶಿಯರ ಅಧಿನಿಯಮ, 1946 (1946ರ 31) ಅಥವಾ ಪಾಸ್‌ಪೋರ್ಟ್ (ಭಾರತದೊಳಕ್ಕೆ ಪ್ರವೇಶ) ಅಧಿನಿಯಮ, 1920 (1920ರ 34) ರಲ್ಲಿ ಪರಿಭಾಷಿಸಿದ ಪದಗಳು ಮತ್ತು ಪದಾವಳಿಗಳು ಆ ಅಧಿನಿಯಮಗಳಲ್ಲಿ ಅವುಗಳಿಗೆ ಅನುಕ್ರಮವಾಗಿ ನೀಡಿರುವ ಅರ್ಥಗಳನ್ನೇ ಹೊಂದಿರತಕ್ಕದ್ದು.

**3. ಭಾರತದೊಳಕ್ಕೆ ಕರೆತಂದ ಪ್ರಯಾಣಿಕರ ಬಗ್ಗೆ ವಾಹಕರ ಹೊಣೆಗಾರಿಕೆ.-** ಪಾಸ್‌ಪೋರ್ಟ್ (ಭಾರತದೊಳಕ್ಕೆ ಪ್ರವೇಶ) ಅಧಿನಿಯಮ, 1920ರ ಉಪಬಂಧಗಳನ್ನು ಹಾಗೂ ಅದರ ಮೇರೆಗೆ ರಚಿಸಿದ ನಿಯಮಗಳನ್ನು ಉಲ್ಲಂಘನೆ ಮಾಡಿ, ಯಾವನೇ ವಾಹಕನು ಒಬ್ಬ ವ್ಯಕ್ತಿಯನ್ನು ಭಾರತದೊಳಕ್ಕೆ ಕರೆತಂದಿದ್ದಾನೆಂದು ಸಕ್ಷಮ ಪ್ರಾಧಿಕಾರಿಯು ಅಭಿಪ್ರಾಯಪಟ್ಟಲ್ಲಿ, ಅವನು, ಆದೇಶದ ಮೂಲಕ ಅಂತಹ ವಾಹಕನಿಗೆ ಒಂದು ಲಕ್ಷ ರೂಪಾಯಿಗಳ ದಂಡವನ್ನು ವಿಧಿಸಬಹುದು:

ಪರಂತು, ವಾಹಕನಿಗೆ ಆ ವಿಷಯದ ಬಗ್ಗೆ ತನ್ನ ಅಹವಾಲನ್ನು ಹೇಳಿಕೊಳ್ಳಲು ಒಂದು ಅವಕಾಶವನ್ನು ನೀಡಿದ ಹೊರತು ಯಾವುದೇ ಆದೇಶವನ್ನು ಮಾಡತಕ್ಕದ್ದಲ್ಲ.

**3ಎ. ವಿನಾಯಿತಿ ನೀಡಲು ಅಧಿಕಾರ.-** (1) ಪಾಸ್‌ಪೋರ್ಟ್ (ಭಾರತದೊಳಕ್ಕೆ ಪ್ರವೇಶ) ಅಧಿನಿಯಮ, 1920ರ (1920ರ 34) ಮತ್ತು ಅದರ ಮೇರೆಗೆ ರಚಿಸಿದ ನಿಯಮಗಳ ಉಪಬಂಧಗಳಿಗೆ ಬಾಧಕವಾಗದಂತೆ, ಕೇಂದ್ರ ಸರ್ಕಾರವು ಸಾರ್ವಜನಿಕ ಹಿತದೃಷ್ಟಿಯಿಂದ ಅಥವಾ ಅಂತರಾಷ್ಟ್ರೀಯ ಹೊಣೆಗಾರಿಕೆಯನ್ನು ಪೂರೈಸಲು ಅವಶ್ಯಕ ಅಥವಾ ವಿಹಿತವೆಂದು ಅಭಿಪ್ರಾಯಪಟ್ಟರೆ, ಅದು ರಾಜಪತ್ರದಲ್ಲಿ ಅಧಿಸೂಚಿಸಿದ ಆದೇಶದ ಮೂಲಕ ಮತ್ತು ಆ ಆದೇಶದಲ್ಲಿ ನಿರ್ದಿಷ್ಟಪಡಿಸಬಹುದಾದಂಥ ಷರತ್ತುಗಳಿಗೆ ಒಳಪಟ್ಟು, ಈ ಅಧಿನಿಯಮದ ಎಲ್ಲಾ ಅಥವಾ ಯಾವುವೇ ಉಪಬಂಧಗಳ ಪ್ರವರ್ತನೆಯಿಂದ ಯಾವನೇ ವಾಹಕನಿಗೆ ಅಥವಾ ವಾಹಕರ ವರ್ಗಕ್ಕೆ ವಿನಾಯಿತಿ ನೀಡಬಹುದು

ಮತ್ತು ಅವಶ್ಯವಾಗಬಹುದಾದಷ್ಟು ಸಲ ಅಂಥ ಆದೇಶವನ್ನು ರದ್ದುಗೊಳಿಸಬಹುದು ಅಥವಾ ಮಾರ್ಪಾಟು ಮಾಡಬಹುದು.

(2) ಈ ಪ್ರಕರಣದ ಮೇರೆಗೆ ರಚಿಸಿದ ಪ್ರತಿಯೊಂದು ಆದೇಶವನ್ನು, ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ಸಂಸತ್ತಿನ ಪ್ರತಿಯೊಂದು ಸದನದ ಮುಂದೆ ಮಂಡಿಸತಕ್ಕದ್ದು.

**4. ಅಪೀಲುಗಳು.–** (1) ಭಾರತ ಸರ್ಕಾರದ ಗೃಹ ವ್ಯವಹಾರಗಳ ಮಂತ್ರಾಲಯದಲ್ಲಿ ಈ ಬಗ್ಗೆ ಆ ಸರ್ಕಾರದಿಂದ ಅಧಿಕೃತನಾಗಿರುವ ಸರ್ಕಾರದ ಜಂಟಿ ಕಾರ್ಯದರ್ಶಿಗೆ ಈ ಅಧಿನಿಯಮದ 3ನೇ ಪ್ರಕರಣದ ಮೇರೆಗೆ ಮಾಡಿದ ಆದೇಶದ ವಿರುದ್ಧ ಅಪೀಲು ಸಲ್ಲಿಸಲು ಅವಕಾಶವಿರತಕ್ಕದ್ದು.

(2) ಯಾವ ಆದೇಶದ ವಿರುದ್ಧ ಅಪೀಲು ಸಲ್ಲಿಸಲಾಗಿದೆಯೋ ಆ ಆದೇಶದ ದಿನಾಂಕದಿಂದ ಮೂವತ್ತು ದಿನಗಳೊಳಗೆ ಅಂತಹ ಪ್ರತಿಯೊಂದು ಅಪೀಲನ್ನು ಸಲ್ಲಿಸತಕ್ಕದ್ದು:

ಪರಂತು, ಅಪೀಲುದಾರನಿಗೆ ಮೂವತ್ತು ದಿನಗಳ ಅವಧಿಯೊಳಗೆ ಸದರಿ ಅಪೀಲು ಸಲ್ಲಿಸಲು ಸಾಕಷ್ಟು ಕಾರಣಗಳಿಂದ ಅಡ್ಡಿಯುಂಟಾಗಿತ್ತೆಂದು ಅಪೀಲು ಪ್ರಾಧಿಕಾರಕ್ಕೆ ಮನದಟ್ಟಾದರೆ, ಅಪೀಲುದಾರನಿಗೆ, ಮೂವತ್ತು ದಿನಗಳ ಹೆಚ್ಚಿನ ಅವಧಿಯೊಳಗೆ ಅಪೀಲು ಸಲ್ಲಿಸಲು ಅನುಮತಿ ನೀಡಬಹುದು.

(3) ಅಂತಹ ಯಾವುದೇ ಅಪೀಲನ್ನು ಸ್ವೀಕರಿಸಿದ ಮೇಲೆ, ಅಪೀಲು ಪ್ರಾಧಿಕಾರವು, ಪಕ್ಷಕಾರರಿಗೆ ಅಹವಾಲನ್ನು ಹೇಳಿಕೊಳ್ಳಲು ಒಂದು ಸೂಕ್ತ ಅವಕಾಶವನ್ನು ನೀಡಿದ ನಂತರ ಮತ್ತು ತಾನು ಸೂಕ್ತವೆಂದು ಭಾವಿಸುವಂತಹ ವಿಚಾರಣೆಯನ್ನು ನಡೆಸಿದ ನಂತರ, ಯಾವ ಆದೇಶದ ವಿರುದ್ಧ ಅಪೀಲು ಮಾಡಲಾಗಿದೆಯೋ ಆ ಆದೇಶವನ್ನು ತಾನು ಯುಕ್ತವೆಂದು ಭಾವಿಸಿದಂತೆ ಸ್ಥಿರೀಕರಿಸುವ, ಮಾರ್ಪಾಟು ಮಾಡುವ ಅಥವಾ ವಿಪರ್ಯಯಗೊಳಿಸುವಂತಹ ಆದೇಶವನ್ನು ಮಾಡಬಹುದು.

(4) ಪ್ರತಿಯೊಂದು ಅಪೀಲನ್ನು, ಗೊತ್ತುಪಡಿಸಬಹುದಾದಂತಹ ಶುಲ್ಕವನ್ನು ಸಂದಾಯ ಮಾಡಿದ ಮೇಲೆ ಸಲ್ಲಿಸತಕ್ಕದ್ದು.

**5. ಸರ್ಕಾರಕ್ಕೆ ಬರಬೇಕಾದ ದಂಡದ ವಸೂಲಾತಿ.–** ಈ ಅಧಿನಿಯಮದ ಮೇರೆಗೆ ವಿಧಿಸಿದ ಯಾವುದೇ ದಂಡವನ್ನು ಸಂದಾಯ ಮಾಡದಿದ್ದಾಗ, ಸಕ್ಷಮ ಪ್ರಾಧಿಕಾರಿಯು,–

(ಎ) ವಿಮಾನವನ್ನು ಅಥವಾ ಹಡಗನ್ನು; ಅಥವಾ

(ಬಿ) ವಾಹಕನಿಗೆ ಸೇರಿದ ಹಡಗಿನಲ್ಲಿರುವ ಅಥವಾ ವಿಮಾನದಲ್ಲಿರುವ ಯಾವುದೇ ಸರಕುಗಳನ್ನು

– ವಶಪಡಿಸಿಕೊಳ್ಳುವ, ತಡೆಹಿಡಿಯುವ ಅಥವಾ ಮಾರಾಟ ಮಾಡುವ ಮೂಲಕ, ಹಾಗೆ ಸಂದಾಯವಾಗಬೇಕಾದ ದಂಡವನ್ನು ವಸೂಲು ಮಾಡಬಹುದು.

**6. ಕಾನೂನು ವ್ಯವಹರಣೆಗಳ ಪ್ರತಿಷೇಧ.–** ಈ ಅಧಿನಿಯಮದ ಅಥವಾ ಅದರ ಮೇರೆಗೆ ರಚಿಸಿದ ಯಾವುದೇ ನಿಯಮದ ಮೇರೆಗೆ ಸದ್ಭಾವನೆಯಿಂದ ಮಾಡಿದ ಅಥವಾ ಮಾಡಲು ಉದ್ದೇಶಿಸಿದ ಯಾವುದೇ ಕಾರ್ಯಕ್ಕೆ ಸಂಬಂಧಿಸಿದಂತೆ ಈ ಅಧಿನಿಯಮದ ಮೇರೆಗೆ ಯಾವುವೇ ಅಧಿಕಾರಗಳನ್ನು ಚಲಾಯಿಸುವ ಅಥವಾ ಯಾವುದೇ ಪ್ರಕಾರ್ಯಗಳನ್ನು ನಿರ್ವಹಿಸುವ ಅಥವಾ ಯಾವುದೇ ಕರ್ತವ್ಯವನ್ನು ನೆರವೇರಿಸುವ ಕೇಂದ್ರ ಸರ್ಕಾರ ಅಥವಾ ಸಕ್ಷಮ ಪ್ರಾಧಿಕಾರಿಯ ಅಥವಾ ಕೇಂದ್ರ ಸರ್ಕಾರದ ಯಾವನೇ ಅಧಿಕಾರಿಯ ಅಥವಾ ಯಾವನೇ ಇತರ ಅಧಿಕಾರಿಯ ವಿರುದ್ಧ ಯಾವುದೇ ದಾವೆಯನ್ನು, ಪ್ರಾಸಿಕ್ಯೂಷನನ್ನು ಅಥವಾ ಇತರ ಕಾನೂನು ವ್ಯವಹರಣೆಯನ್ನು ಹೂಡಲು ಅವಕಾಶವಿರತಕ್ಕದ್ದಲ್ಲ.

**7. 1939ರ 16, 1920ರ 34 ಮತ್ತು 1946ರ 31 ಅಧಿನಿಯಮಗಳ ಅನ್ವಯವನ್ನು ಪ್ರತಿಷೇಧಿಸತಕ್ಕದ್ದಲ್ಲ.–** ಈ ಅಧಿನಿಯಮದ ಉಪಬಂಧಗಳು ಮತ್ತು ಅದರ ಮೇರೆಗೆ ರಚಿಸಿದ ನಿಯಮಗಳು ವಿದೇಶಿಯರ ನೋಂದಣಿ ಅಧಿನಿಯಮ, 1939, ಪಾಸ್‌ಪೋರ್ಟ್ (ಭಾರತದೊಳಕ್ಕೆ ಪ್ರವೇಶ) ಅಧಿನಿಯಮ, 1920 ಮತ್ತು ವಿದೇಶಿಯರ ಅಧಿನಿಯಮ, 1946ರ ಅಥವಾ ಅದರ ಮೇರೆಗೆ ರಚಿಸಿದ ನಿಯಮಗಳ ಅಥವಾ ಆದೇಶಗಳ ಜತೆಗೆ ಇರತಕ್ಕದ್ದು ಮತ್ತು ಅವುಗಳನ್ನು ಕುಂಠಿತಗೊಳಿಸತಕ್ಕದ್ದಲ್ಲ.

**8. ನಿಯಮ ರಚನಾಧಿಕಾರ.–** (1) ಕೇಂದ್ರ ಸರ್ಕಾರವು, ರಾಜಪತ್ರದಲ್ಲಿ ಅಧಿಸೂಚನೆಯ ಮೂಲಕ, ಈ ಅಧಿನಿಯಮದ ಉದ್ದೇಶಗಳನ್ನು ಕಾರ್ಯಗತಗೊಳಿಸಲು ನಿಯಮಗಳನ್ನು ರಚಿಸಬಹುದು.

(2) ವಿಶೇಷವಾಗಿ ಮತ್ತು ಮೇಲೆ ಹೇಳಿದ ಅಧಿಕಾರದ ಸಾಮಾನ್ಯಾನ್ವಯಕ್ಕೆ ಬಾಧಕವಾಗದಂತೆ, ಅಂತಹ ನಿಯಮಗಳು ಈ ಕೆಳಕಂಡ ವಿಷಯಗಳ ಬಗ್ಗೆ ಉಪಬಂಧಿಸಬಹುದು,–

(ಎ) 4ನೇ ಪ್ರಕರಣದ (4)ನೇ ಉಪಪ್ರಕರಣದ ಮೇರೆಗೆ ಅಪೀಲುಗಳಿಗೆ ಸಂದಾಯ ಮಾಡತಕ್ಕ ಶುಲ್ಕಗಳು;

(ಬಿ) ಗೊತ್ತುಪಡಿಸಬೇಕಾದ ಅಥವಾ ಗೊತ್ತುಪಡಿಸಬಹುದಾದ ಯಾವುದೇ ಇತರ ವಿಷಯ.

**9. ನಿಯಮಗಳನ್ನು ಸಂಸತ್ತಿನ ಮುಂದೆ ಮಂಡಿಸತಕ್ಕದ್ದು.–** ಈ ಅಧಿನಿಯಮದ ಮೇರೆಗೆ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ ಆದಷ್ಟು ಬೇಗನೆ, ಸಂಸತ್ತಿನ ಪ್ರತಿಯೊಂದು ಸದನದ ಮುಂದೆ, ಅದು ಅಧಿವೇಶನದಲ್ಲಿರುವಾಗ, ಒಂದು ಅಧಿವೇಶನದಲ್ಲಿ ಅಥವಾ ಒಂದಾದ ಮೇಲೊಂದರಂತೆ ಬರುವ ಎರಡು ಅಥವಾ ಹೆಚ್ಚಿನ ಅಧಿವೇಶನಗಳಲ್ಲಿ ಅಡಕವಾಗಬಹುದಾದಂತಹ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಮಂಡಿಸತಕ್ಕದ್ದು, ಮತ್ತು ಮೇಲೆ ಹೇಳಿದ ಅಧಿವೇಶನಕ್ಕೆ ಅಥವಾ ಒಂದಾದ ಮೇಲೊಂದರಂತೆ ಬರುವ ಅಧಿವೇಶನಗಳ ನಿಕಟೋತ್ತರದ ಅಧಿವೇಶನದ ಮುಕ್ತಾಯಕ್ಕೆ ಮುಂಚೆ ಆ ನಿಯಮದಲ್ಲಿ ಯಾವುದೇ ಮಾರ್ಪಾಟನ್ನು ಮಾಡಬೇಕೆಂದು ಎರಡೂ ಸದನಗಳು ಒಪ್ಪಿದರೆ ಅಥವಾ ಆ ನಿಯಮವನ್ನು ಮಾಡಕೂಡದೆಂದು ಎರಡೂ ಸದನಗಳು ಒಪ್ಪಿದರೆ, ಆ ತರುವಾಯ ಆ ನಿಯಮವು ಸಂದರ್ಭಾನುಸಾರ, ಹಾಗೆ ಮಾರ್ಪಾಟಾದ ರೂಪದಲ್ಲಿ ಮಾತ್ರ ಪರಿಣಾಮಕಾರಿಯಾಗತಕ್ಕದ್ದು ಅಥವಾ ಪರಿಣಾಮಕಾರಿಯಾಗತಕ್ಕದ್ದಲ್ಲ; ಆದಾಗ್ಯೂ, ಅಂಥ ಯಾವುದೇ ಮಾರ್ಪಾಟು ಅಥವಾ ರದ್ದಿಯಾತಿಯು ಆ ನಿಯಮದ ಮೇರೆಗೆ ಹಿಂದೆ ಮಾಡಿದ ಯಾವುದೇ ಕಾರ್ಯದ ಸಿಂಧುತ್ವಕ್ಕೆ ಬಾಧಕವನ್ನುಂಟುಮಾಡತಕ್ಕದ್ದಲ್ಲ.

**10. ತೊಂದರೆಗಳನ್ನು ನಿವಾರಿಸುವ ಅಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೆ ತರುವಲ್ಲಿ ಯಾವುದೇ ತೊಂದರೆ ಉದ್ಭವಿಸಿದರೆ, ಆ ತೊಂದರೆಯನ್ನು ನಿವಾರಿಸುವ ಉದ್ದೇಶಕ್ಕಾಗಿ ಅಂತಹ ಉಪಬಂಧಗಳಿಗೆ ಅಸಂಗತವಲ್ಲದ ಯಾವುದೇ ಕಾರ್ಯವನ್ನು ಕೇಂದ್ರ ಸರ್ಕಾರವು, ಆದೇಶದ ಮೂಲಕ ಮಾಡಬಹುದು:

ಪರಂತು, ಈ ಅಧಿನಿಯಮದ ಪ್ರಾರಂಭದ ದಿನಾಂಕದಿಂದ ಎರಡು ವರ್ಷಗಳ ಮುಕ್ತಾಯದ ನಂತರ, ಅಂತಹ ಯಾವುದೇ ಆದೇಶವನ್ನು ಮಾಡತಕ್ಕದ್ದಲ್ಲ.

(2) ಈ ಪ್ರಕರಣದ ಮೇರೆಗೆ ಮಾಡಿದ ಪ್ರತಿಯೊಂದು ಆದೇಶವನ್ನು, ಅದನ್ನು ಮಾಡಿದ ತರುವಾಯ ಆದಷ್ಟು ಬೇಗನೆ, ಸಂಸತ್ತಿನ ಪ್ರತಿಯೊಂದು ಸದನದ ಮುಂದೆ ಮಂಡಿಸತಕ್ಕದ್ದು.

* * * *